ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 7/2/2021


# ನಾಮಪತ್ರ ಸಲ್ಲಿಕೆಗೆ ಸಮಯ ನಿಗದಿ

**ಬೆಂಗಳೂರು:** ಸಭಾಪತಿ ಸ್ಥಾನಕ್ಕೆ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿರುವ ಬಸವರಾಜ ಹೊರಟ್ಟಿ ಅವರು ಸೋಮವಾರ ಬೆಳಗ್ಗೆ 10–15ಕ್ಕೆ ನಾಮಪತ್ರ ಸಲ್ಲಿಸಲಿದ್ದಾರೆ.

ಸೋಮವಾರ ಬೆಳಗ್ಗೆ 10.15 ರಿಂದ 10.30 ರವರೆಗೆ ಶುಭ ಘಳಿಗೆ ಇದೆ. ಈ ಶುಭ ಘಳಿಗೆಯಲ್ಲಿ ನಾಮಪತ್ರ ಸಲ್ಲಿಸುವಂತೆ ರೇವಣ್ಣ ಸಲಹೆ ನೀಡಿರುವ ಹಿನ್ನೆಲೆಯಲ್ಲಿ ಅದೇ ಸಮಯಕ್ಕೆ ನಾಮಪತ್ರ ಸಲ್ಲಿಸಲು ಬಸವರಾಜ ಹೊರಟ್ಟಿ ನಿರ್ಧರಿಸಿದ್ದಾರೆ.

**ಪರಿಷತ್ ಚುನಾವಣೆ**



ಈ ಕುರಿತು ಬಸವರಾಜ ಹೊರಟ್ಟಿ ಅವರೇ ಮಾಧ್ಯಮಗಳಿಗೆ ವಿಷಯ ತಿಳಿಸಿ, ಸೋಮವಾರ ಬೆಳಗ್ಗೆ 10.15 ರಿಂದ 10.30 ರವರೆಗೆ ಶುಭ ಘಳಿಗೆ ಇದೆ. ಈ ಶುಭ ಘಳಿಗೆಯಲ್ಲಿ ನಾಮಪತ್ರ ಸಲ್ಲಿಸುವಂತೆ ರೇವಣ್ಣ ಸಲಹೆ ನೀಡಿದ್ದಾರೆ ಅವರ ಸಲಹೆಯಂತೆ ಸೂಕ್ತ ಸಮಯದಲ್ಲಿ ನಾಮಪತ್ರ ಸಲ್ಲಿಸಲಾಗುತ್ತದೆ ಎಂದರು. ನಿಮ್ಮ ವಿರುದ್ಧವಾಗಿ ಕಾಂಗ್ರೆಸ್ ನಾಮಪತ್ರ ಸಲ್ಲಿಸಲಿದೆಯೇ ಎಂಬ ಪ್ರಶ್ನೆಗೆ ನನಗೆ ಗೊತ್ತಾಗಿರುವ ಮಾಹಿತಿ ಪ್ರಕಾರ ಕಾಂಗ್ರೆಸ್ ಸದಸ್ಯ ನಜೀರ್ ಅಹ್ಮದ್ ನಾಮಪತ್ರ ಸಲ್ಲಿಸುವ ಸಾಧ್ಯತೆಗಳಿವೆ. ಅದು ಸೋಮವಾರ ಗೊತ್ತಾಗಲಿದೆ ಎಂದರು.

ಸದನದಲ್ಲಿ ಮೀಸಲಾತಿ ಶಿಫಾರಸು ಅಸಾಧ್ಯ ಎಂಬ ಮುಖ್ಯಮಂತ್ರಿಗಳ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಯಾವುದೋ ಒತ್ತಡದ ಕಾರಣ ಮುಖ್ಯಮಂತ್ರಿಗಳು ಹಾಗೆ ಹೇಳಿರಬಹುದು. ಆದರೂ ಯಡಿಯೂರಪ್ಪ ಹಿಂದುಳಿದ ವರ್ಗಗಳ ಆಯೋಗಕ್ಕೆ ಪತ್ರ ಬರೆದಿದ್ದಾರೆ. ಪಂಚಮಸಾಲಿ ಸಮುದಾಯವನ್ನು ಪ್ರವರ್ಗ 2ಎ ಸೇರ್ಪಡೆ ಸಾಧ್ಯವೇ ಎಂಬುದನ್ನು ಪರಿಶೀಲಿಸಿ ಸಮಗ್ರ ವರದಿ ನೀಡುವಂತೆ ಆದೇಶಿಸಿದ್ದಾರೆ. ಇದು ಒಳ್ಳೆಯ ಬೆಳವಣಿಗೆ ಎಂದು ಹೇಳಿದ್ದಾರೆ.

ಜನಪ್ರತಿನಿಧಿಗಳ ಮೇಲೆ ಸ್ವಾಮೀಜಿಗಳ ಒತ್ತಡ ವಿಚಾರ ಕುರಿತು ಮಾತನಾಡಿದ ಹೊರಟ್ಟಿ, ನಲವತ್ತು ವರ್ಷಗಳ ಹಿಂದೆ ಇದ್ದ ವಾತಾವರಣ ಈಗ ಇಲ್ಲ. ರಾಜಕಾರಣಿಗಳ ಮೇಲೆ ಜನರಿಗೆ ಈಗ ವಿಶ್ವಾಸ ಕಡಿಮೆಯಾಗಿದೆ. ಹಾಗಾಗಿ ಸ್ವಾಮೀಜಿಗಳ ಮೂಲಕ ಆಯಾ ಸಮುದಾಯಗಳು ಒತ್ತಡ ಹಾಕುತ್ತಿವೆ. ಒತ್ತಡ ಹಾಕಿ ತಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳುತ್ತಿವೆ. ಹಾಗಾಗಿ ಒತ್ತಡ ಹಾಕುವುದು ತಪ್ಪಲ್ಲ. ಆದರೆ, ನಿನ್ನೆ ಸ್ವಾಮೀಜಿಗಳು ಮಾತನಾಡಿರುವ ವಿಷಯಗಳ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದು ಸೂಕ್ತವಲ್ಲ. ಈಗ ಪ್ರತಿಯೊಂದೂ ಜಾತಿ ಮೇಲೆ ಹೊರಟಿದೆ. ಸ್ವಾಮೀಜಿಗಳು ಸಮಾಜಕ್ಕೆ ಒಳಿತು ಮಾಡಲು ಹೊರಟಿದ್ದಾರೆ ಎಂದಿದ್ದಾರೆ.